**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1696/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಎಸ್.ರಾಜೇಶ್ | ಫ್ರಾಸಾ-5 |
| ತಂದೆಯ ಹೆಸರು | : ಲೇಟ್ ಶಾಮ್ | ಚಾಸಾ-10 |
| ವಯಸ್ಸು | : 49 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಮುಖ್ಯ ಪೇದೆ | ದಿನಾಂಕಃ 06.04.2026. |
| ವಾಸಸ್ಥಳ | : ಕುದುರೆಮುಖ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಫ್ರಾಷ್ಟ್ಯಾಸ.ಸ.ಅ. ರವರಿಂದ:**

ನಾನು ಸೆಪ್ಟಂಬರ್ 2020 ರಿಂದ ಇಲ್ಲಿಯವರೆಗೂ ಕುದುರೆಮುಖ ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.15.03.2024 ರಂದು ನಾನು ಹಗಲು SHO ಕರ್ತವ್ಯದಲ್ಲಿ ನಿರತನಾಗಿರುವಾಗ ರಾ.20.00 ರ ಸಮಯದಲ್ಲಿ ಚಾಸಾ-4 ರವರು ಠಾಣೆಗೆ ಹಾಜರಾಗಿ ನೀಡಿದ ವರದಿಯನ್ನು ಸ್ವೀಕರಿಸಿಕೊಂಡು ಠಾಣಾ ಮೊ.ನಂ.5/2024 ರ ಕಲಂ 32 ಮತ್ತು 34 ರೀತ್ಯಾ ಪ್ರಕರಣವನ್ನು ದಾಖಲು ಮಾಡಿಕೊಂಡಿರುತ್ತೇನೆ. ನಂತರ ಚಾಸಾ-1 ರವರು ಹಾಜರುಪಡಿಸಿದ ಮಹಜರ್ ಪ್ರತಿ ಮತ್ತು ಮುದ್ದೆ ಮಾಲುಗಳನ್ನು ಸ್ವೀಕರಿಸಿಕೊಂಡು ಠಾಣಾ ಮಾಲುಪಟ್ಟಿ ಸಂಖ್ಯೆ 3/2024 ರಲ್ಲಿ ನಮೂದಿಸಿ, ನ್ಯಾಯಾಲಯಕ್ಕೆ ನಿವೇದನೆ ಮಾಡಿಕೊಂಡಿರುತ್ತೇನೆ. ದಿ.16.03.2024 ರಂದು ಚಾಸಾ-2 ರಿಂದ 5 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿ.15.03.2024 ರಂದು ಚಾಸಾ-9 ರವರಿಗೆ ಪ್ರಕರಣದಲ್ಲಿ ಅಮಾನತುಪಡಿಸಿಕೊಂಡ ಮುದ್ದೆ ಮಾಲುಗಳ ಸಂಬಂಧ ವರದಿಯನ್ನು ನೀಡುವಂತೆ ಮನವಿ ಮಾಡಿಕೊಂಡಿರುತ್ತೇನೆ. ಸದರಿ ದಾಖಲಾತಿಯು ನಕಲಾದ ಕಾರಣ ಗುರುತಿಸಲಾಗಿರುವುದಿಲ್ಲ. ದಿ.22.03.2024 ರಂದು ಆರೋಪಿಯ ಸ್ವ ಇಚ್ಛಾ ಹೇಳಿಕೆಯನ್ನು ದಾಖಲು ಮಾಡಿಕೊಂಡಿರುತ್ತೇನೆ. ದಿ.30.04.2024 ರಂದು ಮಹಜರ್ ಸಮಯದಲ್ಲಿ ತೆಗೆದ ಪೋಟೋಗಳನ್ನು ಡಿವಿಡಿಗೆ ವರ್ಗಾಯಿಸಿ ಅದರ ಬಾಬ್ತು ಕಲಂ 65 ಬಿ ರಡಿಯ ಪ್ರತಿಯನ್ನು ನೀಡಿರುತ್ತೇನೆ. ನಂತರ ಕಡತವನ್ನು ಮುಂದಿನ ತನಿಖೆಯ ಸಂಬಂಧ ಹಸ್ತಾಂತರಿಸುವ ಕುರಿತು DySP ರವರಿಗೆ ಮನವಿ ಮಾಡಿಕೊಂಡಿರುತ್ತೇನೆ. ನಂತರದಲ್ಲಿ ಸದರಿಯವರು ಚಾಸಾ-12 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತಾರೆ.

ಸಾಕ್ಷಿಯು ನಿಪಿ-1 ಮತ್ತು 5 ರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-1(ಬಿ) ಮತ್ತು 5(ಎ) ಎಂದು ಗುರುತಿಸಲಾಯಿತು. ದಿ.15.03.2024 ರಂದು ಸಾಕ್ಷಿಯು ದಾಖಲಿಸಿದ ಪ್ರ.ವ.ವರದಿಯನ್ನು ನಿಪಿ-8 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ದಿ.22.03.2024 ರಂದು ದಾಖಲಿಸಿಕೊಂಡ ಸ್ವ ಇಚ್ಛಾ ಹೇಳಿಕೆಯನ್ನು ನಿಪಿ-9, ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಲಯದ ಮುಂದಿರುವ ಆರೋಪಿ ಮತ್ತು ಮುದ್ದೆಮಾಲುಗಳನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಜಿ.ಬಿ.ವಿ. ವಕೀಲರಿಂದಃ**

ದಿ.15.03.2024 ರಂದು ಚಾಸಾ-4 ರವರು ಕೇವಲ ವರದಿಯನ್ನು ಮಾತ್ರ ನೀಡಿರುತ್ತಾರೆ.

ಸದರಿ ದಿನ ನಾನು ಚಾಸಾ-4 ರವರಿಂದ ಯಾವುದೇ ವರದಿಯನ್ನು ಸ್ವೀಕರಿಸಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರು ಹಾಜರುಪಡಿಸಿದ ಮುದ್ದೆ ಮಾಲುಗಳನ್ನು ಮಾಲುಪಟ್ಟಿ ಸಂ.3/2024 ರಡಿಯಲ್ಲಿ ನಮೂದಿಸಿ ನ್ಯಾಯಾಲಯಕ್ಕೆ ಮನವಿ ಮಾಡಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ದಿ.16.03.2024 ರಂದು ಚಾಸಾ-2 ರಿಂದ 5 ರವರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಮತ್ತು ದಿ.30.04.2024 ರಂದು ಮಹಜರ್ ಸಮಯದಲ್ಲಿ ತೆಗೆದ ಫೋಟೋಗಳನ್ನು ಡಿವಿಡಿಗೆ ವರ್ಗಾಯಿಸಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-9 ರವರಿಗೆ ಮುದ್ದೆ ಮಾಲುಗಳಿಗೆ ಸಂಬಂಧಿಸಿದಂತೆ ವರದಿಯನ್ನು ನೀಡುವಂತೆ ಕೇಳಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಆರೋಪಿಯ ಯಾವುದೇ ಸ್ವ ಇಚ್ಛಾ ಹೇಳಿಕೆಯನ್ನು ದಾಖಲು ಮಾಡಿಕೊಳ್ಳದೇ ಖಾಲಿ ಹಾಳೆಗೆ ಆರೋಪಿಯ ಸಹಿಯನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಪ್ರಕರಣವೂ ಸಾಬೀತಾಗದೇ ಇದ್ದರು ಇಲಾಖಾ ಅಂಕಿ ಅಂಶಕ್ಕೋಸ್ಕರ ಮತ್ತು ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿನ ಅಂಶಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರಧನ್ಯಾದಂ., ಮೂಡಿಗೆರೆ.